ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 24 ನೇ ಮಾರ್ಚ್, 2020

ರಾಜ್ಯದಲ್ಲಿನ ಕೈಗಾರಿಕೆಗಳು ಹಾಗೂ ಉದ್ಯಮಗಳ ಬಗ್ಗೆ

ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

1571 (1852) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯವು ಕೈಗಾರಿಕೆ ಅನುಕೂಲಕರವಾದ ವಾತಾವರಣ ಹೊಂದಿದ್ದು, ಅದಕ್ಕನುಗುಣವಾಗಿ ಬಹುತೇಕ ಬಂಡವಾಳ ಹೂಡಿಕೆದಾರರು ಬೆಂಗಳೂರಿನಲ್ಲಿ ಹೂಡಿಕೆ ಮಾಡಲು ಆಸಕ್ತಿ ಹೊಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ನಿಟ್ಟಿನಲ್ಲಿ ಉದ್ಯಮಗಳನ್ನು ಸ್ಥಾಪಿಸಲು ಹೂಡಿಕೆದಾರರಿಗೆ ರಾಜ್ಯದ ಇತರ ಕಡೆಗಳಲ್ಲಿ ಅಗತ್ಯ ಮೂಲ ಸೌಕರ್ಯ ಒದಗಿಸುವುದರ ಅವಶ್ಯಕತೆ ಇರುವುದರ ಬಗ್ಗೆ ಸರ್ಕಾರದ ನಿಲುವೇನು ;

(ಇ) ಈ ಹಿನ್ನಲೆಯಲ್ಲಿ ಸರ್ಕಾರವು ಹೊಸ ಕೈಗಾರಿಕಾ ನೀತಿಯನ್ನು ಜಾರಿಗೆ ತರಲು ಯೋಜಿಸಿದೆಯೇ ; ಇದ್ದರೆ ವಿವರ ನೀಡುವುದು;

(ಈ) ಸಣ್ಣ ಮತ್ತು ಮಧ್ಯಮ ಉದ್ದಿಮೆದಾರರನ್ನು ಉತ್ತೇಜಿಸಲು ನೀಡುವ ಸಬ್ಸಿಡಿ ಮೊತ್ತ ಹೆಚ್ಚಿಸುವ ಬಗ್ಗೆ ಸರ್ಕಾರ ಯೋಚಿಸಿದೆಯೇ?